## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಸಂಖ್ಯೆ : 609 (647)

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 11.03.2020

ಉತ್ತರಿಸುವ ಸಚಿವರು : ಮಾನ್ಯ ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೃಷಿ ಹೊಂಡ ಯೋಜನೆಯಲ್ಲಿ ಅವ್ಯವಹಾರ ನಡೆದಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಪ್ರತಿ ವರ್ಷ ನಿರ್ಮಾಣವಾಗುವ ಕೃಷಿ ಹೊಂಡ ಹಾಗೂ ಪೂರಕ ಘಟಕಗಳ ಪರಿಶೀಲನೆಯನ್ನು ಕ್ಷೇತ್ರ ಮಟ್ಟದಲ್ಲಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಶೇ.100 ರಷ್ಟು , ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಶೇ.25 ರಷ್ಟು, ಉಪ ಕೃಷಿ ನಿರ್ದೇಶಕರು ಶೇ.10 ರಷ್ಟು ಹಾಗೂ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ಶೇ.3 ರಷ್ಟು ಘಟಕಗಳ ಪರಿಶೀಲನೆಯನ್ನು ಕೈಗೊಳ್ಳಲು ಯೋಜನೆಯ ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.<br><br>ಮುಂದುವರೆದು, ರಾಜ್ಯದಲ್ಲಿ ಸರ್ಕಾರದ ಆದೇಶದ ಅನ್ವಯ 2014-15 ನೇ ಸಾಲಿನಿಂದ 2017-18 ನೇ ಸಾಲಿನವರೆಗೆ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ಹಾಗೂ ಪೂರಕ ಘಟಕಗಳ ತಪಾಸಣೆ/ ಪರಿಶೀಲನೆಯನ್ನು ಫಲಾನುಭವಿವಾರು , ವರ್ಷಾವಾರು, ಗ್ರಾಮವಾರು, ಶೇ.100 ರಷ್ಟು ಸ್ಥಳ ಪರಿಶೀಲಿಸಿ ಸಲ್ಲಿಸಿರುವ ವರದಿಯು ದಿನಾಂಕ:23.01.2020ರಂದು ಸರ್ಕಾರಕ್ಕೆ ಸ್ವೀಕೃತವಾಗಿದೆ. ಈ ಯೋಜನೆಯಡಿ ಫಲಾನುಭವಿಗಳು ಘಟಕಗಳನ್ನು ಪಡೆದಿರುವುದಾಗಿ ಕ್ಷೇತ್ರ ಪರಿಶೀಲನಾ ಸಮಯದಲ್ಲಿ ದೃಢೀಕರಣ ನೀಡಿರುತ್ತಾರೆ. ಸ್ಥಳ ಪರಿಶೀಲನೆಯಲ್ಲಿ ಅವ್ಯವಹಾರದ ಬಗ್ಗೆ ವರದಿಯಾಗಿರುವುದಿಲ್ಲ. |

| | | |
|---|---|---|
| ಆ) | ಸದರಿ ಅವ್ಯವಹಾರದ ಸಂಬಂಧ ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಅನ್ವಯಿಸುವುದಿಲ್ಲ |
| ಇ) | ಸದರಿ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ಹಾಗೂ ಗುತ್ತಿಗೆದಾರರ ಸಂಖ್ಯೆ ಎಷ್ಟು; (ವರ್ಗವಾರು ವಿವರ ನೀಡುವುದು) | ಅನ್ವಯಿಸುವುದಿಲ್ಲ |
| ಈ) | ಸದರಿ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ಹಾಗೂ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಅನ್ವಯಿಸುವುದಿಲ್ಲ |

ಸಂಖ್ಯೆ:AGRI-AML-55/2020

(ಬಿ.ಸಿ.ಪಾಟೀಲ್)
ಕೃಷಿ ಸಚಿವರು